## ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:** ಪ್ರತಿ ಜಿಲ್ಲೆಗೆ ರೂ.1.00 ಕೋಟಿ ವೆಚ್ಚದಲ್ಲಿ ಡಿ. ದೇವರಾಜ ಅರಸು ಭವನ ನಿರ್ಮಾಣ ಮಾಡುವ ಬಗ್ಗೆ.

**ಓದಲಾಗಿದೆ:** ಹಿಂದುಳಿದ ವರ್ಗಗಳ ಏಕರೂಪ ಕಡತ ಸಂಖ್ಯೆ: ಹಿಂವಕನಿ/ವನಿಶಾ-2/ದೇಅಭ/ಸಿಆರ್-9/2012-13 ದಿನಾಂಕ: 17/09/2012.

**ಪ್ರಸ್ತಾವನೆ:**

ಮೇಲೆ ಓದಲಾದ ಹಿಂದುಳಿದ ವರ್ಗಗಳ ಏಕರೂಪ ಕಡತ ಪ್ರಸ್ತಾವನೆಯಲ್ಲಿ ದಿನಾಂಕ:20/08/2012ರಂದು ಜರುಗಿದ ಡಿ. ದೇವರಾಜ ಅರಸು ರವರ 97ನೇ ಜನ್ಮ ದಿನಾಚರಣೆ ಸಮಯದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಸರ್ಕಾರವು ರೂಪಿಸಿರುವ ಯೋಜನೆಗಳು ಅನುಷ್ಠಾನಕ್ಕೆ ತರಲು ಪ್ರತ್ಯೇಕ ಸಚಿವಾಲಯವನ್ನು ಪ್ರಾರಂಭಿಸಿ, ಪ್ರತಿ ತಾಲ್ಲೂಕಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಕಛೇರಿಯನ್ನು ಸ್ಥಾಪಿಸಲಾಗುವುದು ಎಂದು ಘೋಷಿಸಲಾಗಿದೆ.

ಈ ಕಛೇರಿಗಳು ಕಾರ್ಯನಿರ್ವಹಿಸಬೇಕಾಗಿದ್ದಲ್ಲಿ ನಿರಂತರವಾಗಿ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ವಿವಿಧ ವೃತ್ತಿಗಳಲ್ಲಿ ತರಬೇತಿ ನೀಡಲು, ವಿವಿಧ ಅರಿವು ಮೂಡಿಸುವ ಕಾರ್ಯಗಾರಗಳನ್ನು ನಡೆಸಲು, ಇತರೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು, ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಕಛೇರಿಯನ್ನು ಒಳಗೊಂಡಂತೆ ಪ್ರತಿ ತಾಲ್ಲೂಕಿನಲ್ಲಿ ಒಂದು ದೇವರಾಜ ಅರಸು ಭವನವನ್ನು ರೂ.1.00 ಕೋಟಿ ವೆಚ್ಚದಲ್ಲಿ ನಿರ್ಮಿಸುವ ಅಗತ್ಯವಿರುತ್ತದೆ. ಆದ ಕಾರಣ ಉತ್ತರ ಕರ್ನಾಟಕ ಗುಲ್ಬರ್ಗಾ, ಬೀದರ್, ಯಾದಗಿರಿ, ಕೊಪ್ಪಳ, ರಾಯಚೂರು, ಬಳ್ಳಾರಿ, ಬೆಳಗಾಂ, ಧಾರವಾಡ, ಬಿಜಾಪುರ, ಬಾಗಲಕೋಟೆ, ದಾವಣಗೆರೆ, ಚಿತ್ರದುರ್ಗ, ಹಾವೇರಿ, ಗದಗ ಈ ಜಿಲ್ಲೆಗಳ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಡಿ. ದೇವರಾಜ ಅರಸು ಭವನವನ್ನು ರೂ.1.00 ಕೋಟಿ ವೆಚ್ಚದಲ್ಲಿ ನಿರ್ಮಿಸಲು ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಸದರಿ ವಿಷಯವನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 337 ಬಿಎಂಎಸ್ 2012, ಬೆಂಗಳೂರು,**
**ದಿನಾಂಕ: 13/12/2012.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಪ್ರತಿ ಜಿಲ್ಲೆಗೆ ಒಂದರಂತೆ ರೂ.1.00 ಕೋಟಿಗಳ (ರೂಪಾಯಿ ಒಂದು ಕೋಟಿಗಳು ಮಾತ್ರ) ವೆಚ್ಚದಲ್ಲಿ: ಒಟ್ಟು 30 (ಮೂವತ್ತು) ಶ್ರೀ ಡಿ. ದೇವರಾಜ ಅರಸು ಭವನಗಳನ್ನು ನಿರ್ಮಾಣ ಮಾಡಲು ಮಂಜೂರಾತಿ ನೀಡಿದೆ.

ಸದರಿ ವೆಚ್ಚವನ್ನು ಲೆಕ್ಕ ಶೀರ್ಷಿಕೆ 4225-03-283-0-01 (ರಾಜ್ಯ ವಲಯ) ಯೋಜನೆ ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ದಿನಾಂಕ: 18/10/2012ರಂದು ಗುಲ್ಬರ್ಗಾದಲ್ಲಿ ನಡೆದ ಸಚಿವ ಸಂಪುಟ ಸಭೆಯ ನಿರ್ಣಯದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಎಂ. ಜಿ. ಮುಳಕೂರ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:

1) ಮಹಾಲೇಖಪಾಲರು,. (ಲೆಕ್ಕಪತ್ರ/ಲೆಕ್ಕಪರಿಶೋಧನೆ-1 ಮತ್ತು 2) ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಿಕಾಸಸೌಧ.
5) ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ.
6) ವ್ಯವಸ್ಥಾಪಕ ನಿರ್ದೇಶಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
7) ಖಜಾನೆ ಅಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ ವ್ಯವಹಾರಗಳು), ವಿಧಾನಸೌಧ, ಬೆಂಗಳೂರು.
9) ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
10) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಧಾನಸೌಧ, ಬೆಂಗಳೂರು.
11) ಶಾಖಾ ರಕ್ಷಾ ಕಡತ/ ಬಿಡಿ ಪ್ರತಿಗಳು.

22 MAY

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪ್ರತಿ ಜಿಲ್ಲೆಗೆ ರೂ.1.00 ಕೋಟಿ ವೆಚ್ಚದಲ್ಲಿ ಡಿ.ದೇವರಾಜ ಅರಸು ಭವನ ನಿರ್ಮಾಣ ಮಾಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 337 ಬಿಎಂಎಸ್ 2012, ದಿನಾಂಕ:13.12.2012

2) ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕ ಕಡತ ಸಂಖ್ಯೆ ಹಿಂವಕನಿ/ದೇವಅ/ವಿನಿ-9/2012-13. ದಿ:08/01/2013

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ಆದೇಶದಲ್ಲಿ ಪ್ರತಿ ಜಿಲ್ಲೆಗೆ ಒಂದರಂತೆ ರೂ.1.00 ಕೋಟಿಗಳ ವೆಚ್ಚದಲ್ಲಿ ಒಟ್ಟು 30 ಡಿ.ದೇವರಾಜ ಅರಸು ಭವನಗಳನ್ನು ನಿರ್ಮಾಣ ಮಾಡಲು ಮಂಜೂರಾತಿ ನೀಡಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2) ರಲ್ಲಿ ಯಾವ ಜಿಲ್ಲೆಯ ಯಾವ ತಾಲ್ಲೂಕಿನಲ್ಲಿ ಈ ಭವನವನ್ನು ನಿರ್ಮಿಸಬಹುದು ಎಂಬ ಬಗ್ಗೆ ಪ್ರಸ್ತಾವನೆಯನ್ನು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 337 ಬಿಎಂಎಸ್ 2012,**
**ಬೆಂಗಳೂರು ದಿನಾಂಕ:20/03/2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಅನುಬಂಧದಲ್ಲಿ ತೋರಿಸಿರುವಂತೆ 30 ಜಿಲ್ಲೆಗಳಲ್ಲಿ ಡಿ.ದೇವರಾಜ ಅರಸು ಭವನಗಳನ್ನು ನಿರ್ಮಿಸಲು ಅನುಮತಿ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಲ್.ಜಿ.ಮುಳಕೂರ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಪ್ರತಿಯನ್ನು:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ
4. ಎಲ್ಲಾ ಜಿಲ್ಲಾಧಿಕಾರಿಗಳು
5. ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳು. } ಆಯುಕ್ತರು, ಹಿಂ.ವ.ಕ.ಇ ಇವರ ಮೂಲಕ
6. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ಆಂತರಿಕ ಆರ್ಥಿಕ ಸಲಹೆಗಾರರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಬೆಂಗಳೂರು.
8. ಮಾನ್ಯ ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಹಾಗೂ ಬಂಧೀಖಾನೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯು 337 ಬಿಎಂಎಸ್ 2012,

ದಿನಾಂಕ:18.03.2013ಕ್ಕೆ

**ಅನುಬಂಧ**

| ಕ್ರ.ಸಂ. | ಜಿಲ್ಲೆ | ತಾಲ್ಲೂಕು |
|---|---|---|
| 1 | ಬೆಂಗಳೂರು ನಗರ | ಆನೇಕಲ್ |
| 2 | ಬೆಂಗಳೂರು ಗ್ರಾಮಾಂತರ | ಹೊಸಕೋಟೆ |
| 3 | ರಾಮನಗರ | ಮಾಗಡಿ |
| 4 | ಚಿತ್ರದುರ್ಗ | ಹೊಸದುರ್ಗ |
| 5 | ದಾವಣಗೆರೆ | ಹರಪನಹಳ್ಳಿ |
| 6 | ಕೋಲಾರ | ಮುಳಬಾಗಿಲು |
| 7 | ಚಿಕ್ಕಬಳ್ಳಾಪುರ | ಬಾಗೇಪಲ್ಲಿ |
| 8 | ಶಿವಮೊಗ್ಗ | ಸೊರಬ |
| 9 | ತುಮಕೂರು | ಪಾವಗಡ |
| 10 | ಚಾಮರಾಜನಗರ | ಕೊಳ್ಳೇಗಾಲ |
| 11 | ಚಿಕ್ಕಮಗಳೂರು | ಕಡೂರು |
| 12 | ದಕ್ಷಿಣ ಕನ್ನಡ | ಸುಳ್ಯ |
| 13 | ಹಾಸನ | ಅರಕಲಗೂಡು |
| 14 | ಕೊಡಗು | ಸೋಮವಾರಪೇಟೆ |
| 15 | ಮೈಸೂರು | ಹೆಚ್.ಡಿ.ಕೋಟೆ |
| 16 | ಮಂಡ್ಯ | ಮಳವಳ್ಳಿ |
| 17 | ಉಡುಪಿ | ಕಾರ್ಕಳ |
| 18 | ಬಳ್ಳಾರಿ | ಶಿರಗುಪ್ಪ |
| 19 | ಬೀದರ್ | ಹುಮ್ನಾಬಾದ್ |
| 20 | ಗುಲ್ಬರ್ಗ | ಕಮಲಾಪುರ |
| 21 | ಯಾದಗಿರಿ | ಶೋರಾಪುರ |
| 22 | ಕೊಪ್ಪಳ | ಯಲಬುರ್ಗ |
| 23 | ರಾಯಚೂರು | ಮಾನ್ವಿ |
| 24 | ಬಾಗಲಕೋಟೆ | ಬೀಳಗಿ |
| 25 | ಬೆಳಗಾಂ | ಅಥಣಿ |
| 26 | ಬಿಜಾಪುರ | ಮುದ್ದೇಬಿಹಾಳ |
| 27 | ಧಾರವಾಡ | ಕಲಘಟಗಿ |
| 28 | ಗದಗ | ಮುಂಡರಗಿ |
| 29 | ಹಾವೇರಿ | ಶಿಗ್ಗಾವ್ |
| 30 | ಉತ್ತರಕನ್ನಡ | ಭಟ್ಕಳ್ |

(ಎಂ.ಜಿ.ಮುಳಕೂರ)

ಸರ್ಕಾರದ ಅಧೀನ ಕಾರ್ಯದರ್ಶಿ-2

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.